ದಿನಾಂಕಃ 04-03-2026 ರಂದು ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು.

**ಮುಂದುವರೆದ ಪಾಟೀ ಸವಾಲುಃ** ಪ್ರತಿವಾದಿ 8 ರವರ ಪರ ವಕೀಲರಿಂದ,

1) ನಾನು ಹಾಜರುಪಡಿಸಿರುವ ದಾಖಲೆಗಳ ಬಗ್ಗೆ ನನಗೆ ಗೊತ್ತಿರುವುದಿಲ್ಲ. ನಾನು ಹಾಜರುಪಡಿಸಿರುವ ದಾಖಲೆಗಳಲ್ಲಿ ನಮೂದು ಇರುವ ಆಸ್ತಿಗಳಿಗೂ ಹಾಗೂ ನನಗೂ ಸಂಬಂಧ ಇರುವುದಿಲ್ಲ ಎಂದರೆ ಸರಿಯಲ್ಲ. ಸರ್ವೇ ನಂ. 198/2 ಎ ಹೊಸ ನಂಬರ ಆಗಿದ್ದು, ಸದರಿ ಆಸ್ತಿಯೂ ಯಾರ ಹೆಸರಿನಲ್ಲಿ ಇದೆ ಎಂದರೆ ನನಗೆ ಗೊತ್ತಿಲ್ಲ.

**ಮುಂದುವರೆದ ಪಾಟೀ ಸವಾಲುಃ** ಪ್ರತಿವಾದಿ 23 ಮತ್ತು 24 ರವರ ಪರ ವಕೀಲರಿಂದ,

2) ನಾನು ಹಾಜರುಪಡಿಸಿರುವ ನಿಶಾನೆ ಪಿ-28 ರಿಂದ 36 ದಾಖಲಾತಿಗಳು ಪ್ರತಿವಾದಿ 23 ಮತ್ತು 24 ರವರಿಗೆ ಸಂಬಂಧಿಸಿರುವುದಿಲ್ಲ ಎಂದರೆ ಸರಿಯಲ್ಲ. ನಾನು ಹಾಜರುಪಡಿಸಿರುವ ದಾಖಲಾತಿಗಳಲ್ಲಿ ನಮೂದು ಆಗಿರುವ ಸರ್ವೆ ನಂಬರಗಳು ನನಗೆ ಗೊತ್ತಿರುವುದಿಲ್ಲ. ನಿಶಾನೆ ಪಿ-30 ದಾಖಲೆಯಲ್ಲಿ ಇರುವ ಆಸ್ತಿ ಚಂದ್ರಶೇಖರ ರವರಿಗೆ ಯಾವ ರೀತಿ ಬಂದಿರುತ್ತದೆ ಎಂದರೆ ನನಗೆ ಗೊತ್ತಿಲ್ಲ. ನಾನು ಹಾಜರುಪಡಿಸಿರುವ ದಾಖಲೆಗಳ ಬಗ್ಗೆ ನನಗೆ ಗೊತ್ತಿರುವುದಿಲ್ಲ. ನಾನು ಹಾಜರುಪಡಿಸಿರುವ ದಾಖಲೆಗಳನ್ನು ನಾನು ಓದಿ ತಿಳಿದುಕೊಂಡಿರುವುದಿಲ್ಲ. ನಾಗರಾಜ ಮಗ ಚಂದ್ರಶೇಖರ ನನಗೆ ಗೊತ್ತಿರುವುದಿಲ್ಲ.

**ಮರುವಿಚಾರಣೆಃ ಇಲ್ಲ**

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿ ಹೇಳಿದನ್ನು ಬೆರಳಚ್ಚುಗಾರರಿಗೆ ಉಕ್ತಲೇಖನ ನೀಡಿ ಬೆರಳಚ್ಚು ಮಾಡಿಸಲಾಯಿತು)

ಓ ಹೇ.ಕೇ.ಸ.ಇ.ಒ.,

ಹಿರಿಯ ಸಿವಿಲ್ ನ್ಯಾಯಾಧೀಶರು
ಮತ್ತು ಪ್ರದನ್ಯಾದಂ., ಕೆ.ಆರ್.ನಗರ